ಅಜಕೊಬ್ ಸಂಖ್ಯೆ: 08
E-429380/2022

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಭಾರತೀಯ ಸೇನೆ/ಇತರೆ ಯೂನಿಫಾರ್ಮ್ ಸೇವೆ ಗಳಿಗೆ ಸೇರ ಬಯಸುವ ರಾಜ್ಯದ ಹಿಂದುಳಿದ ವರ್ಗಗಳ/ಪರಿಶಿಷ್ಟ ಜಾತಿಯ ಅರ್ಹ ಅಭ್ಯರ್ಥಿಗಳಿಗೆ ಆಯ್ಕೆಯ ಪೂರ್ವ ಸಿದ್ಧತೆ ಬಗ್ಗೆ ವೃತ್ತಿ ಮಾರ್ಗದರ್ಶನ ಹಾಗೂ ತರಬೇತಿ ನೀಡುವ ಕುರಿತು.

**ಓದಲಾಗಿದೆ:** ಮಾನ್ಯ ಇಲಾಖಾ ಸಚಿವರ ಟಿಪ್ಪಣಿ ಸಂಖ್ಯೆ: SW/BCW/MIN/9979/2022-23, ದಿನಾಂಕ:20.05.2022

******

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಮಾನ್ಯ ಇಲಾಖಾ ಸಚಿವರ ಟಿಪ್ಪಣಿಯಲ್ಲಿ ಕರಾವಳಿ ಜಿಲ್ಲೆಗಳ ಬಹುಕಾಲದ ಬೇಡಿಕೆಯಾದ ಸೇನಾ ಆಯ್ಕೆ ಪೂರ್ವ ತರಬೇತಿ ಶಾಲೆಗಳನ್ನು ಈ ಕೆಳಕಂಡ ಜಿಲ್ಲೆಗಳಲ್ಲಿ ಆರಂಭಿಸುವ ಕುರಿತು ಅಗತ್ಯ ಪ್ರಸ್ತಾವನೆ ಮಂಡಿಸುವಂತೆ ಸೂಚಿಸಿರುತ್ತಾರೆ.

- ದಕ್ಷಿಣ ಕನ್ನಡ ಜಿಲ್ಲೆ ವೀರರಾಣಿ ಅಬ್ಬಕ್ಕ ಸೇನಾ ಆಯ್ಕೆ ಪೂರ್ವ ತರಬೇತಿ ಶಾಲೆ.
- ಉಡುಪಿ ಜಿಲ್ಲೆ ಕೋಟಿ ಚೆನ್ನಯ್ಯ ಅವಳಿ ವೀರ ಪುರುಷರ ಹೆಸರಿನಲ್ಲಿ ಸೇನಾ ಆಯ್ಕೆ ಪೂರ್ವ ತರಬೇತಿ ಶಾಲೆ
- ಉತ್ತರ ಕನ್ನಡ ಜಿಲ್ಲೆ ಬ್ರಿಟಿಷರ ವಿರುದ್ಧ ಹೊರಾಡಿದ ಹೆಂಜಾ ನಾಯಕ ಹೆಸರಿನಲ್ಲಿ ಸೇನಾ ಆಯ್ಕೆ ಪೂರ್ವ ತರಬೇತಿ ಶಾಲೆ

ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಬೆಂಗಳೂರು ಇವರು ಹೆಚ್ಚಿನ ಸಂಖ್ಯೆಯಲ್ಲಿ ರಾಜ್ಯದ ಹಿಂದುಳಿದ ವರ್ಗಗಳ ಅಭ್ಯರ್ಥಿಗಳು ಸೇನೆ/ಇತರೆ ಸೇವೆಗಳಿಗೆ ಆಯ್ಕೆಯಾಗಲು ಪ್ರೋತ್ಸಾಹಿಸುವ ದೃಷ್ಟಿಯಿಂದ ಭಾರತೀಯ ಸೇನೆ/ಇತರೆ ಯೂನಿಫಾರ್ಮ್ ಸೇವೆಗಳಿಗೆ ಸೇರ ಬಯಸುವ ರಾಜ್ಯದ ಹಿಂದುಳಿದ ವರ್ಗಗಳ/ಪರಿಶಿಷ್ಟ ಜಾತಿಯ ಅರ್ಹ ಅಭ್ಯರ್ಥಿಗಳಿಗೆ ಸೇನಾ ಆಯ್ಕೆಯ ಪೂರ್ವಸಿದ್ಧತೆ ಬಗ್ಗೆ ವೃತ್ತಿ ಮಾರ್ಗದರ್ಶನ ಮತ್ತು ತರಬೇತಿಯನ್ನು ಉಚಿತ ಊಟ ಮತ್ತು ವಸತಿ ಸೌಲಭ್ಯದೊಂದಿಗೆ ನೀಡಲು ಕಾರ್ಯಕ್ರಮದ ಕರಡು ಮಾರ್ಗಸೂಚಿಗಳನ್ನು ಸಿದ್ಧಪಡಿಸಿ ಸಲ್ಲಿಸಿರುತ್ತಾರೆ.

ಮೇಲಿನ ಎಲ್ಲಾ ವಿಷಯಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಹಿಂವಕ 393 ಬಿಎಂಎಸ್ 2022, ಬೆಂಗಳೂರು, ದಿನಾಂಕ:20-06-2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಹಾಗೂ ಸಮಾಜ ಕಲ್ಯಾಣ ಇಲಾಖೆಯಿಂದ ಭಾರತೀಯ ಸೇನೆ/ಇತರೆ ಯೂನಿಫಾರ್ಮ್ ಸೇವೆಗಳಿಗೆ ಸೇರ ಬಯಸುವ ರಾಜ್ಯದ ಹಿಂದುಳಿದ ವರ್ಗಗಳ/ಪರಿಶಿಷ್ಟ ಜಾತಿಯ ಅರ್ಹ ಅಭ್ಯರ್ಥಿಗಳಿಗೆ ಆಯ್ಕೆಯ ಪೂರ್ವ ಸಿದ್ಧತೆ ಬಗ್ಗೆ ವೃತ್ತಿ ಮಾರ್ಗದರ್ಶನ ಹಾಗೂ ತರಬೇತಿಯನ್ನು ಉಚಿತ ಊಟ ಮತ್ತು ವಸತಿಯೊಂದಿಗೆ ನೀಡಲು ಈ ಕೆಳಕಂಡ ಜಿಲ್ಲೆಗಳಲ್ಲಿ ಸೇನಾ ತರಬೇತಿ ಶಾಲೆಗಳನ್ನು ಪ್ರಾರಂಭಿಸಲು ಅನುಮೋದನೆ ನೀಡಿ ಆದೇಶಿಸಿದೆ.

- ದಕ್ಷಿಣ ಕನ್ನಡ ಜಿಲ್ಲೆ ವೀರರಾಣಿ ಅಬಕ್ಕ ಸೇನಾ ಆಯ್ಕೆ ಪೂರ್ವ ತರಬೇತಿ ಶಾಲೆ
- ಉಡುಪಿ ಜಿಲ್ಲೆ ಕೋಟಿ ಚೆನ್ನಯ್ಯ ಅವಳಿ ವೀರ ಪುರುಷರ ಹೆಸರಿನಲ್ಲಿ ಸೇನಾ ಆಯ್ಕೆ ಪೂರ್ವ ತರಬೇತಿ ಶಾಲೆ
- ಉತ್ತರ ಕನ್ನಡ ಜಿಲ್ಲೆ ಬ್ರಿಟಿಷರ ವಿರುದ್ಧ ಹೊರಾಡಿದ ಹೆಂಜಾ ನಾಯಕ ಹೆಸರಿನಲ್ಲಿ ಸೇನಾ ಆಯ್ಕೆ ಪೂರ್ವ ತರಬೇತಿ ಶಾಲೆ.

V. Akkamahadevi

ಸದರಿ ತರಬೇತಿ ಕಾರ್ಯಕ್ರಮವನ್ನು ಈ ಆದೇಶಕ್ಕೆ ಲಗತ್ತಿಸಲಾದ ಅನುಬಂಧದಲ್ಲಿ ನೀಡಲಾದ ಮಾರ್ಗಸೂಚಿಗಳನ್ವಯ ಅನುಷ್ಠಾನಗೊಳಿಸತಕ್ಕದ್ದು.

ಇದಕ್ಕೆ ತಗಲುವ ವೆಚ್ಚವನ್ನು ತರಬೇತಿ, ಅರಿವು ಮತ್ತು ಪ್ರೋತ್ಸಾಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ಕಾರ್ಯಕ್ರಮದ ರಾಜ್ಯವಲಯ ಲೆಕ್ಕಶೀರ್ಷಿಕೆ:2225-03-277-2-37 ರ ಅಬ್ಜೆಕ್ಟಿವ್ ಕೋಡ್ 059 ರಡಿ ಭರಿಸತಕ್ಕದ್ದು.

ಈ ತರಬೇತಿ ಕಾರ್ಯಕ್ರಮಕ್ಕೆ ಸಮಾಜ ಕಲ್ಯಾಣ ಇಲಾಖೆಯು ಸಹಮತಿ ನೀಡಿದ್ದು, ಪರಿಶಿಷ್ಟ ಜಾತಿಯ ಅಭ್ಯರ್ಥಿಗಳಿಗೆ ತಗಲುವ ವಾರ್ಷಿಕ ವೆಚ್ಚ ರೂ.67,50,000/- ಗಳನ್ನು ಸಮಾಜ ಕಲ್ಯಾಣ ಇಲಾಖೆಯು ಭರಿಸತಕ್ಕದ್ದು.

ಈ ಆದೇಶವನ್ನು ಮಾನ್ಯ ಇಲಾಖಾ ಸಚಿವರ ಅನುಮೋದನೆಯೊಂದಿಗೆ ಹಾಗೂ ಸರ್ಕಾರದ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
V. Akkamahadevi 20/6/22
(ವಿ. ಅಕ್ಕಮಹಾದೇವಿ)
ಸರ್ಕಾರದ ಅಧೀನ ಕಾರ್ಯದರ್ಶಿ-1
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು , (ಎ ಮತ್ತು ಇ), ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು. (ಈ ತರಬೇತಿ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಪರಿಶಿಷ್ಟ ಜಾತಿಯ ಅಭ್ಯರ್ಥಿಗಳಿಗೆ ತಗಲುವ ವಾರ್ಷಿಕ ವೆಚ್ಚ ರೂ.67,50,000/-ಗಳನ್ನು ಸಮಾಜ ಕಲ್ಯಾಣ ಇಲಾಖೆಯು ಒದಗಿಸುವಂತೆ ಕೋರಿದೆ.)
3. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ-3), ವಿಧಾನ ಸೌಧ, ಬೆಂಗಳೂರು.
4. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
5. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
6. ಕಾರ್ಯಾನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
7. ಜಿಲ್ಲಾಧಿಕಾರಿಗಳು, ದಕ್ಷಿಣ ಕನ್ನಡ ಜಿಲ್ಲೆ, ಉಡುಪಿ ಜಿಲೆ, ಉತ್ತರ ಕನ್ನಡ ಜಿಲ್ಲೆ. (ಆಯುಕ್ತರ ಮುಖಾಂತರ)
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ದಕ್ಷಿಣ ಕನ್ನಡ ಜಿಲ್ಲೆ, ಉಡುಪಿ ಜಿಲ್ಲೆ, ಉತ್ತರ ಕನ್ನಡ ಜಿಲ್ಲೆ. (ಆಯುಕ್ತರ ಮುಖಾಂತರ)
9. ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು, ದಕ್ಷಿಣ ಕನ್ನಡ ಜಿಲ್ಲೆ, ಉಡುಪಿ ಜಿಲ್ಲೆ, ಉತ್ತರ ಕನ್ನಡ ಜಿಲ್ಲೆ. (ಆಯುಕ್ತರ ಮುಖಾಂತರ)
10. ಜಿಲ್ಲಾ ಅಧಿಕಾರಿ ಸಮಾಜ ಕಲ್ಯಾಣ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ, ಉಡುಪಿ ಜಿಲ್ಲೆ, ಉತ್ತರ ಕನ್ನಡ ಜಿಲ್ಲೆ. (ಆಯುಕ್ತರ ಮುಖಾಂತರ)

**ಪ್ರತಿ ಮಾಹಿತಿಗಾಗಿ:**

1. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ. ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ. ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು.

3. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸ ಸೌಧ, ಬೆಂಗಳೂರು.
4. ಸರ್ಕಾರದ ಉಪ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸ ಸೌಧ, ಬೆಂಗಳೂರು.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

## ಅನುಬಂಧ

## ಸರ್ಕಾರದ ಆದೇಶ ಸಂಖ್ಯೆ: ಹಿಂವಕ 393 ಬಿಎಂಎಸ್ 2022, ದಿನಾಂಕ:20-06-2022.

**ಭಾರತೀಯ ಸೇನೆ/ಇತರೆ ಯೂನಿಫಾರ್ಮ್ ಸೇವೆಗಳಿಗೆ ಸೇರ ಬಯಸುವ ರಾಜ್ಯದ ಹಿಂದುಳಿದ ವರ್ಗಗಳ/ಪರಿಶಿಷ್ಟ ಜಾತಿಯ ಅರ್ಹ ಅಭ್ಯರ್ಥಿಗಳಿಗೆ ಆಯ್ಕೆಯ ಪೂರ್ವಸಿದ್ಧತೆ ಬಗ್ಗೆ ವೃತ್ತಿ ಮಾರ್ಗದರ್ಶನ ಮತ್ತು ತರಬೇತಿ ಕಾರ್ಯಕ್ರಮದ ಮಾರ್ಗಸೂಚಿಗಳು:**

**ಯೋಜನೆಯನ್ನು ಅನುಷ್ಠಾನಗೊಳಿಸುತ್ತಿರುವ ಜಿಲ್ಲೆಗಳ ವಿವರ.**

1. ದಕ್ಷಿಣ ಕನ್ನಡ ಜಿಲ್ಲೆ ವೀರರಾಣಿ ಅಬ್ಬಕ್ಕ ಸೇನಾ ಆಯ್ಕೆ ಪೂರ್ವ ತರಬೇತಿ ಶಾಲೆ.
2. ಉಡುಪಿ ಜಿಲ್ಲೆ ಕೋಟೆ ಚೆನ್ನಯ್ಯ ಅವಳಿ ವೀರ ಪುರುಷರ ಹೆಸರಿನಲ್ಲಿ ಸೇನಾ ಆಯ್ಕೆ ಪೂರ್ವ ತರಬೇತಿ ಶಾಲೆ.
3. ಬ್ರಿಟೀಷರ ವಿರುದ್ಧ ಹೋರಾಡಿದ ಉತ್ತರ ಕನ್ನಡ ಜಿಲ್ಲೆ ಹೆಂಜಾ ನಾಯಕ ಹೆಸರಿನಲ್ಲಿ ಸೇನಾ ಆಯ್ಕೆ ಪೂರ್ವ ತರಬೇತಿ ಶಾಲೆ.

**ಯೋಜನೆಯ ಉದ್ದೇಶ:-**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖೆಯಿಂದ ಭಾರತೀಯ ಸೇನೆ/ಇತರೆ ಯೂನಿಫಾರ್ಮ್ ಸೇವೆಗಳಿಗೆ ಸೇರ ಬಯಸುವ ರಾಜ್ಯದ ಹಿಂದುಳಿದ ವರ್ಗಗಳ/ಪರಿಶಿಷ್ಟ ಜಾತಿಯ ಅರ್ಹ ಅಭ್ಯರ್ಥಿಗಳಿಗೆ ಆಯ್ಕೆಯ ಪೂರ್ವ ಸಿದ್ಧತೆ ಬಗ್ಗೆ ವೃತ್ತಿ ಮಾರ್ಗದರ್ಶನ ಹಾಗೂ ತರಬೇತಿಯನ್ನು ಉಚಿತ ಊಟ ಮತ್ತು ವಸತಿ ಸೌಲಭ್ಯದೊಂದಿಗೆ ನೀಡಿ ಹೆಚ್ಚಿನ ಸಂಖ್ಯೆಯಲ್ಲಿ ರಾಜ್ಯದ ಹಿಂದುಳಿದ ವರ್ಗಗಳ ಅಭ್ಯರ್ಥಿಗಳು ಸೇನೆ/ಇತರೆ ಸೇವೆಗಳಿಗೆ ಆಯ್ಕೆಯಾಗಲು ಪ್ರೋತ್ಸಾಹಿಸುವುದು.

1. **ತರಬೇತಿ ಪಡೆಯಲಿಚ್ಛಿಸುವ ಅಭ್ಯರ್ಥಿಗಳಿಗೆ ನಿಗದಿಪಡಿಸುವ ಅರ್ಹತೆಗಳು:**

ಅ) ಭಾರತದ ಪ್ರಜೆಯಾಗಿದ್ದು, ಕರ್ನಾಟಕದ ಖಾಯಂ ನಿವಾಸಿಯಾಗಿರಬೇಕು.

ಆ) ಕರ್ನಾಟಕ ಸರ್ಕಾರ ಅಧಿಸೂಚಿಸಿರುವ ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ, 3ಬಿ ಮತ್ತು ಪರಿಶಿಷ್ಟ ಜಾತಿಗೆ ಸೇರಿರಬೇಕು.

ಇ)ವಿವಿಧ ಹುದ್ದೆಗಳಿಗೆ ಸೇನಾ ನೇಮಕಾತಿ ಪ್ರಾಧಿಕಾರ ನಿಗದಿಪಡಿಸುವ ವಯೋಮಿತಿಗೆ ಅನುಗುಣವಾಗಿ ಅಭ್ಯರ್ಥಿಗಳ ವಯೋಮಿತಿಯನ್ನು ತರಬೇತಿಗೆ ಪರಿಗಣಿಸಲಾಗುವುದು.

ಈ) ಹಿಂದುಳಿದ ವರ್ಗಗಳ ಅಭ್ಯರ್ಥಿಗಳ ಕುಟುಂಬದ ಒಟ್ಟು ವಾರ್ಷಿಕ ಆದಾಯ ಮಿತಿ:

- ಪ್ರವರ್ಗ-1 - ರೂ.2.50 ಲಕ್ಷ.
- ಪ್ರವರ್ಗ-2(ಎ), 3(ಎ) ಮತ್ತು 3(ಬಿ) - ರೂ.1.00 ಲಕ್ಷ.

2. **ಪ್ರವರ್ಗವಾರು ಮೀಸಲಾತಿ:**

ಭಾರತೀಯ ಸೇನೆಗೆ ಸೇರ ಬಯಸುವ ರಾಜ್ಯದ ಹಿಂದುಳಿದ ವರ್ಗಗಳ ಅರ್ಹ ಅಭ್ಯರ್ಥಿಗಳಿಗೆ ಆಯ್ಕೆಯ ಪೂರ್ವ ಸಿದ್ಧತೆ ಬಗ್ಗೆ ವೃತ್ತಿ ಮಾರ್ಗದರ್ಶನ ಮತ್ತು ತರಬೇತಿಗೆ ಅಭ್ಯರ್ಥಿಗಳನ್ನು ನಿಯೋಜಿಸುವಾಗ ಈ ಕೆಳಗಿನ ಮೀಸಲಾತಿ ಅನುಪಾತವನ್ನು ಕಾಯ್ದುಕೊಳ್ಳುವುದು.

| ಕ್ರ.ಸಂ. | ಪ್ರವರ್ಗ | ಶೇಕಡ |
|---|---|---|
| 1 | 1 | 15% |
| 2 | 2ಎ | 53% |
| 3 | 3ಎ | 15% |
| 4 | 3ಬಿ | 17% |
| | ಒಟ್ಟು | **100%** |

P. Akbamahadevi

3. ಹಿಂದುಳಿದ ವರ್ಗಗಳಿಗೆ ಸಂಬಂಧಪಟ್ಟಂತೆ ಒಂದು ವೇಳೆ ಯಾವುದಾದರೂ ಪ್ರವರ್ಗದಲ್ಲಿ ಹಿಂದುಳಿದ ವರ್ಗಗಳ ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ, ಇತರೆ ಪ್ರವರ್ಗಗಳ ಅಭ್ಯರ್ಥಿಗಳನ್ನು ಶೇಕಡವಾರು ಮೀಸಲಾತಿಯನ್ವಯ ತರಬೇತಿಗೆ ಆಯ್ಕೆ ಮಾಡುವುದು.
4. ಸಮಾಜ ಕಲ್ಯಾಣ ಇಲಾಖೆಯು ದಕ್ಷಿಣ ಕನ್ನಡ ಜಿಲ್ಲೆ, ಉಡುಪಿ ಜಿಲ್ಲೆ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ನೀಡುವ ಸದರಿ ತರಬೇತಿಗೆ ಪರಿಶಿಷ್ಟ ಜಾತಿಗಳ 25 ಅಭ್ಯರ್ಥಿಗಳನ್ನು ಆಯ್ಕೆ ಮಾಡಿ, ಹಿಂದುಳಿದ ವರ್ಗಗಳ ಅಭ್ಯರ್ಥಿಗಳ ಜೊತೆಯಲ್ಲಿಯೇ ಸದರಿ ತರಬೇತಿ ನೀಡುವುದು. ಸದರಿ ಪರಿಶಿಷ್ಟ ಜಾತಿಗಳ ಅಭ್ಯರ್ಥಿಗಳ ತರಬೇತಿಗೆ ತಗಲುವ ವೆಚ್ಚ (ತಲಾ ಅಭ್ಯರ್ಥಿಗೆ ರೂ.30,000/-ದಂತೆ) ವನ್ನು ಸಮಾಜ ಕಲ್ಯಾಣ ಕಲ್ಯಾಣ ಇಲಾಖೆಯಿಂದ ಭರಿಸುವುದು.

5. **ಇತರೆ ಅಂಶಗಳು:**

a. ದಕ್ಷಿಣ ಕನ್ನಡ ಜಿಲ್ಲೆ, ಉಡುಪಿ ಜಿಲ್ಲೆ ಮತ್ತು ಉತ್ತರ ಕನ್ನಡ ಜಿಲ್ಲೆಗಳ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಮತ್ತು ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳನ್ನೊಳಗೊಂಡ ಮೇಲುಸ್ತುವಾರಿ ಸಮಿತಿಯು ಕಾರ್ಯಕ್ರಮದ ಉಸ್ತುವಾರಿ ವಹಿಸುವುದು ಮತ್ತು ಕಾರ್ಯಕ್ರಮವನ್ನು ಅನುಷ್ಠಾನ ಮಾಡುವುದು.

b. ಸದರಿ ತರಬೇತಿಗೆ ನಿಗದಿತ ಶೈಕ್ಷಣಿಕ, ದೈಹಿಕ ಅರ್ಹತೆಯನ್ನು ಹೊಂದಿರುವ ಹಿಂದುಳಿದ ವರ್ಗಗಳ ಅರ್ಹ ಅಭ್ಯರ್ಥಿಗಳನ್ನು ಮೇಲುಸ್ತುವಾರಿ ಸಮಿತಿಯು ಆಯ್ಕೆ ಮಾಡಿ, ತರಬೇತಿಗೆ ನಿಯೋಜಿಸುವುದು.

c. ಅಭ್ಯರ್ಥಿಗಳನ್ನು ಆಯ್ಕೆ ಮಾಡುವಾಗ ಆಯಾ ಜಿಲ್ಲೆಗಳ ಸ್ಥಳೀಯ ಅಭ್ಯರ್ಥಿಗಳಿಗೆ ಶೇ.30 ರಷ್ಟು ಮೀಸಲಾತಿ ನೀಡುವುದು. ಒಂದು ವೇಳೆ ಅರ್ಹ ಸ್ಥಳೀಯ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಇತರೆ ಜಿಲ್ಲೆಗಳ ಅರ್ಹ ಅಭ್ಯರ್ಥಿಗಳನ್ನು ತರಬೇತಿಗೆ ಆಯ್ಕೆ ಮಾಡುವುದು.

d. ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಕನ್ನಡ ಜಿಲ್ಲೆಗಳಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ವತಿಯಿಂದ ನಡೆಯುತ್ತಿರುವ ಉತ್ತಮ ಆಟದ ಮೈದಾನಗಳಿರುವ ಯಾವುದಾದರೊಂದು ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ/ಏಕಲವ್ಯ/ಅಟಲ್ ಬಿಹಾರಿ ವಾಜಪೇಯಿ/ಅಂಬೇಡ್ಕರ್ ಶಾಲೆ/ಇಂದಿರಾ ಗಾಂಧಿ ವಸತಿ ಶಾಲೆಗಳನ್ನು ಆಯ್ಕೆ ಮಾಡಿಕೊಂಡು ಸದರಿ ಶಾಲೆಗಳಲ್ಲಿನ ಆಟದ ಮೈದಾನ ಉಪಯೋಗಿಸಿಕೊಂಡು ತರಬೇತಿಯನ್ನು ನೀಡುವುದು.

e. ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಕನ್ನಡ ಜಿಲ್ಲೆಗಳಲ್ಲಿ ಉತ್ತಮ ಆಟದ ಮೈದಾನಗಳಿರುವ ಯಾವುದಾದರೊಂದು ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ/ಏಕಲವ್ಯ/ಅಟಲ್ ಬಿಹಾರಿ ವಾಜಪೇಯಿ/ ಅಂಬೇಡ್ಕರ್ ಶಾಲೆ/ಇಂದಿರಾ ಗಾಂಧಿ ವಸತಿ ಶಾಲೆಗಳನ್ನು ಆಯ್ಕೆ ಮಾಡಿಕೊಂಡು ತರಬೇತಿ ನೀಡಲು ಬಳಸಿಕೊಳ್ಳುವುದು. ಆಯ್ಕೆಯಾದ ಶಾಲೆಯ ಆಟದ ಮೈದಾನಕ್ಕೆ ಅಗತ್ಯವಾದ ಮೂಲಭೂತ ಸೌಲಭ್ಯಗಳನ್ನು ಒದಗಿಸುವುದು.

f. ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಕನ್ನಡ ಜಿಲ್ಲೆಗಳಲ್ಲಿ ತರಬೇತಿ ನೀಡಲು ನಿವೃತ್ತ ಸೇನಾಧಿಕಾರಿಗಳನ್ನು ಮುಖ್ಯಸ್ಥರನ್ನಾಗಿ ನೇಮಿಸಿಕೊಂಡು, ನಿವೃತ್ತ ಸೇನಾಧಿಕಾರಿಗಳ ನೇತೃತ್ವದಲ್ಲಿ ದೈಹಿಕ ತರಬೇತುದಾರರನ್ನು ಹೊರಗುತ್ತಿಗೆ ಮೂಲಕ ನೇಮಿಸಿಕೊಂಡು ತರಬೇತಿಯನ್ನು ನೀಡುವುದು ಅಥವಾ ಈ ಬಗ್ಗೆ ಜಿಲ್ಲಾ ಹಂತದಲ್ಲಿ ಕೆ.ಟಿ.ಪಿ.ಪಿ ಕಾಯ್ದೆ ಹಾಗೂ ನಿಯಮಗಳನ್ವಯ ಟೆಂಡರ್ ಕರೆದು, ಈಗಾಗಲೇ ಸೈನಿಕ ತರಬೇತಿ ನೀಡುತ್ತಿರುವ ಪ್ರತಿಷ್ಠಿತ ಸಂಸ್ಥೆಗಳಿಂದ ನಿಯಮಾನುಸಾರ ತರಬೇತುದಾರರನ್ನು ನೇಮಿಸಿಕೊಂಡು ದೈಹಿಕ ಸಹಿಷ್ಣುತೆ (physical test) ಹಾಗೂ ಲಿಖಿತ ಪರೀಕ್ಷೆಗೆ ತರಬೇತಿಯನ್ನು ನೀಡುವುದು.

V. Akkamahadevi

---3

g. ಸೇನೆ ಮತ್ತು ಪ್ಯಾರಾ ಮಿಲಿಟರಿ ಸೇವೆಗಳಲ್ಲಿ ಸಾಕಷ್ಟು ಹುದ್ದೆಗಳು ಖಾಲಿ ಇದ್ದು, ಸದರಿ ಸೇನಾ ಆಯ್ಕೆ ಪೂರ್ವ ತರಬೇತಿ ಶಾಲೆಗಳ ಮೂಲಕ ಪ್ರಾರಂಭದಲ್ಲಿ ಜವಾನ್ ಮತ್ತು ಕಾನ್‌ಸ್ಟೇಬಲ್ ಹುದ್ದೆಗಳಿಗೆ ಆಯ್ಕೆಯಾಗಲು ಅಭ್ಯರ್ಥಿಗಳಿಗೆ ಪೂರ್ವಭಾವಿ ತರಬೇತಿ ನೀಡುವುದು ಮತ್ತು ಮುಂದಿನ ದಿನಗಳಲ್ಲಿ ಸಬ್‌ಇನ್‌ಸ್‌ಪೆಕ್ಟರ್ ಅಂತಹ ಹುದ್ದೆಗಳಿಗೆ ಆಯ್ಕೆಯಾಗಲು ಸಹ ಅಭ್ಯರ್ಥಿಗಳಿಗೆ ಪೂರ್ವಭಾವಿ ತರಬೇತಿಯನ್ನು ನೀಡುವುದು.

h. ಒಬ್ಬ ಅಭ್ಯರ್ಥಿಗೆ ಒಂದು ಬಾರಿ ಮಾತ್ರ ಸದರಿ ತರಬೇತಿಯ ಸೌಲಭ್ಯವನ್ನು ಒದಗಿಸುವುದು.

i. ತರಬೇತಿ ಅವಧಿಯು 4 ತಿಂಗಳು ಆಗಿರುತ್ತದೆ. ಮತ್ತು ವರ್ಷದಲ್ಲಿ ಇಂತಹ 3 ಬ್ಯಾಚ್‌ಗಳಲ್ಲಿ ತರಬೇತಿಯನ್ನು ನೀಡುವುದು.

j. ಪ್ರತಿ ಜಿಲ್ಲೆಯಲ್ಲಿನ ಸೇನಾ ಆಯ್ಕೆ ಪೂರ್ವ ತರಬೇತಿ ಶಾಲೆಗೆ 4 ತಿಂಗಳುಗಳಿಗೊಮ್ಮೆ ನಿಯೋಜಿಸುವ ಹಿಂದುಳಿದ ವರ್ಗಗಳ ಅಭ್ಯರ್ಥಿಗಳ ಗರಿಷ್ಠ ಭೌತಿಕ ಗುರಿಯು 100 ಆಗಿರುತ್ತದೆ. ಅದೇ ರೀತಿ ಪರಿಶಿಷ್ಟ ಜಾತಿಗಳ ಅಭ್ಯರ್ಥಿಗಳ ಗರಿಷ್ಠ ಭೌತಿಕ ಗುರಿಯು 25 ಆಗಿರುತ್ತದೆ.

k. ತರಬೇತಿಗೆ ಆಯ್ಕೆಯಾಗುವ ಅಭ್ಯರ್ಥಿಗಳಿಗೆ 4 ತಿಂಗಳುಗಳ ತರಬೇತಿ ಅವಧಿಯಲ್ಲಿ ದೈಹಿಕ ಸಹಿಷ್ಣುತೆ (physical test) ಹಾಗೂ ಲಿಖಿತ ಪರೀಕ್ಷೆಗೆ ಸಂಬಂಧಪಟ್ಟಂತೆ ತರಬೇತಿ ನೀಡುವುದು.

l. ತರಬೇತಿ ನೀಡುವ ಹುದ್ದೆಗಳಿಗೆ ಅನುಗುಣವಾಗಿ ಪಠ್ಯಕ್ರಮ ಮತ್ತು ದೈನಂದಿನ ವೇಳಾಪಟ್ಟಿಯನ್ನು ಮೇಲುಸ್ತುವಾರಿ ಸಮಿತಿಯು ಸಿದ್ಧಪಡಿಸುವುದು.

m. ತರಬೇತಿ ಪಡೆಯುವ ಅಭ್ಯರ್ಥಿಗಳಿಗೆ ಉಚಿತ ಊಟ ಮತ್ತು ವಸತಿ ಸೌಲಭ್ಯವನ್ನು ಒದಗಿಸುವುದು.

n. ತರಬೇತಿಗೆ ಆಯ್ಕೆಯಾಗುವ ಅಭ್ಯರ್ಥಿಗಳಿಗೆ ಒಂದು ಜೊತೆ ಟ್ರ್ಯಾಕ್ ಸೂಟ್, ದೈಹಿಕ ತರಬೇತಿಗೆ ಅಗತ್ಯವಾದ ಒಂದು ಜೊತೆ ಸಮವಸ್ತ್ರ, ಹಾಗೂ ಒಂದು ಜೊತೆ ಶೂಗಳನ್ನು ವಿತರಿಸುವುದು.

o. ಪ್ರವರ್ಗವಾರು ಜಾತಿಗಳ ಪಟ್ಟಿ, ಕುಟುಂಬದ ವಾರ್ಷಿಕ ವರಮಾನ, ಅರ್ಹತೆ ಇತ್ಯಾದಿಗಳು ಸರ್ಕಾರವು ಕಾಲ-ಕಾಲಕ್ಕೆ ಹೊರಡಿಸುವ ಆದೇಶಗಳನ್ವಯ ಪರಿಷ್ಕರಣೆಗೆ ಒಳಪಟ್ಟಿರುತ್ತದೆ.

p. ತರಬೇತಿ ಕೇಂದ್ರಗಳಲ್ಲಿ ಬಯೋಮೆಟ್ರಿಕ್ ಹಾಜರಾತಿ ಉಪಕರಣವನ್ನು ಅಳವಡಿಸಿಕೊಂಡು, ತರಬೇತಿ ಅವಧಿಯಲ್ಲಿ ಅಭ್ಯರ್ಥಿಗಳ ಹಾಜರಾತಿಯನ್ನು ನಿರ್ವಹಿಸುವುದು.

q. ತರಬೇತಿ ಪಡೆಯುವ ಅಭ್ಯರ್ಥಿಗಳಿಗೆ ತರಬೇತಿ ಅವಧಿಯಲ್ಲಿ ಶೇ.80 ರಷ್ಟು ಹಾಜರಾತಿಯು ಕಡ್ಡಾಯವಾಗಿರುತ್ತದೆ.

r. ತರಬೇತಿಯನ್ನು ಪೂರ್ಣಗೊಳಿಸುವ ಅಭ್ಯರ್ಥಿಗಳಿಗೆ ಪ್ರಮಾಣ ಪತ್ರವನ್ನು ವಿತರಿಸುವುದು.

s. ಯಾವುದೇ ಅಭ್ಯರ್ಥಿಯು ತರಬೇತಿಯನ್ನು ಪೂರ್ಣಗೊಳಿಸದೇ, ತರಬೇತಿಯನ್ನು ಮೊಟಕುಗೊಳಿಸಿದಲ್ಲಿ, ಸದರಿ ಅಭ್ಯರ್ಥಿಯ ತರಬೇತಿಗೆ ಮಾಡಿರುವ ವೆಚ್ಚವನ್ನು ಆಯಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು/ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು ಸಂಬಂಧಿಸಿದ ಅಭ್ಯರ್ಥಿಯಿಂದ ವಸೂಲು ಮಾಡುವುದು.

---4

t. ಸದರಿ ತರಬೇತಿಯನ್ನು ಪಡೆದು, ವಿವಿಧ ಹುದ್ದೆಗಳಿಗೆ ಆಯ್ಕೆಯಾಗುವ ಅಭ್ಯರ್ಥಿಗಳ ಮಾಹಿತಿಯನ್ನು ಆಯಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು/ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು ಅಭ್ಯರ್ಥಿಗಳಿಂದ ಪಡೆದು, ನಿರ್ವಹಿಸುವುದು.

u. ಸದರಿ ತರಬೇತಿ ಅವಧಿಯು ಮುಕ್ತಾಯಗೊಂಡ ನಂತರ ತರಬೇತಿ ಕಾರ್ಯಕ್ರಮದ ಅನುಷ್ಠಾನದ ಬಗ್ಗೆ ಅಂತಿಮ ವರದಿಯನ್ನು ಮೇಲುಸ್ತುವಾರಿ ಸಮಿತಿಯು ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಮತ್ತು ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಬೆಂಗಳೂರು, ಇವರುಗಳಿಗೆ ಸಲ್ಲಿಸುವುದು.

v. ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ತರಬೇತಿ ನೀಡಲು ಬೇಕಾದ ಅನುದಾನದ ವಿವರ:

| ಕ್ರ. ಸಂ. | ತರಬೇತಿ ಶಾಲೆ | ಪ್ರತಿ ತರಬೇತಿ ಶಾಲೆಗೆ 4 ತಿಂಗಳ ಒಂದು ಬ್ಯಾಚ್‌ಗೆ 100 ರಂತೆ ಒಟ್ಟು 3 ಬ್ಯಾಚ್‌ಗಳ ಭೌತಿಕ ಗುರಿ | ಪ್ರತಿ ಅಭ್ಯರ್ಥಿಗೆ ರೂ.30,000/- ದಂತೆ ಒಟ್ಟು ವೆಚ್ಚ (ರೂ.ಗಳಲ್ಲಿ) |
|---|---|---|---|
| 1 | ದಕ್ಷಿಣ ಕನ್ನಡ ಜಿಲ್ಲೆ ವೀರರಾಣಿ ಅಬ್ಬಕ್ಕ ಸೇನಾ ಆಯ್ಕೆ ಪೂರ್ವ ತರಬೇತಿ ಶಾಲೆ. | 300 | 90,00,000 |
| 2 | ಉಡುಪಿ ಜಿಲ್ಲೆ ಕೋಟಿ ಚೆನ್ನಯ್ಯ ಅವಳಿ ವೀರ ಪುರುಷರ ಹೆಸರಿನಲ್ಲಿ ಸೇನಾ ಆಯ್ಕೆ ಪೂರ್ವ ತರಬೇತಿ ಶಾಲೆ. | 300 | 90,00,000 |
| 3 | ಬ್ರಿಟೀಷರ ವಿರುದ್ಧ ಹೋರಾಡಿದ ಉತ್ತರ ಕನ್ನಡ ಜಿಲ್ಲೆ ಹೆಂಜಾ ನಾಯಕ ಹೆಸರಿನಲ್ಲಿ ಸೇನಾ ಆಯ್ಕೆ ಪೂರ್ವ ತರಬೇತಿ ಶಾಲೆ. | 300 | 90,00,000 |
| | **ಒಟ್ಟು** | **900** | **2,70,00,000** |

w. ಮೇಲಿನಂತೆ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ಸದರಿ ತರಬೇತಿ ನೀಡಲು ಬೇಕಾಗುವ ಅನುದಾನ ರೂ.2,70,00,000/- (ಎರಡು ಕೋಟಿ ಎಪ್ಪತ್ತು ಲಕ್ಷ ರೂಪಾಯಿಗಳು)ಗಳನ್ನು 2022-23ನೇ ಸಾಲಿಗೆ ತರಬೇತಿ, ಅರಿವು ಮತ್ತು ಪ್ರೋತ್ಸಾಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ಕಾರ್ಯಕ್ರಮದ ರಾಜ್ಯವಲಯ ಲೆಕ್ಕಶೀರ್ಷಿಕೆ:2225-03-277-2-37 ರ ಅಬ್ಜೆಕ್ಟಿವ್ ಕೋಡ್ 059 ರಡಿ ಭರಿಸತಕ್ಕದ್ದು.

x. ಪರಿಶಿಷ್ಟ ಜಾತಿಗಳ ಅಭ್ಯರ್ಥಿಗಳಿಗೆ ತರಬೇತಿ ನೀಡಲು ಸಮಾಜ ಕಲ್ಯಾಣ ಇಲಾಖೆಯಿಂದ ಈ ಕೆಳಕಂಡಂತೆ ನೀಡಬೇಕಾದ ಅನುದಾನವನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ವರ್ಗಾಯಿಸಲು ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳುವುದು.

| ಕ್ರ. ಸಂ. | ತರಬೇತಿ ಶಾಲೆ | ಪ್ರತಿ ತರಬೇತಿ ಶಾಲೆಗೆ 4 ತಿಂಗಳ ಒಂದು ಬ್ಯಾಚ್‌ಗೆ 25 ರಂತೆ ಒಟ್ಟು 3 ಬ್ಯಾಚ್‌ಗಳ ಭೌತಿಕ ಗುರಿ | ಪ್ರತಿ ಅಭ್ಯರ್ಥಿಗೆ ರೂ.30,000/- ದಂತೆ ಒಟ್ಟು ವೆಚ್ಚ (ರೂ.ಗಳಲ್ಲಿ) |
|---|---|---|---|
| 1 | ದಕ್ಷಿಣ ಕನ್ನಡ ಜಿಲ್ಲೆ ವೀರರಾಣಿ ಅಬ್ಬಕ್ಕ ಸೇನಾ ಆಯ್ಕೆ ಪೂರ್ವ ತರಬೇತಿ ಶಾಲೆ. | 75 | 22,50,000 |

| | | | |
|---|---|---|---|
| 2 | ಉಡುಪಿ ಜಿಲ್ಲೆ ಕೋಟಿ ಚೆನ್ನಯ್ಯ ಅವಳಿ ವೀರ ಪುರುಷರ ಹೆಸರಿನಲ್ಲಿ ಸೇನಾ ಆಯ್ಕೆ ಪೂರ್ವ ತರಬೇತಿ ಶಾಲೆ. | 75 | 22,50,000 |
| 3 | ಬ್ರಿಟೀಷರ ವಿರುದ್ಧ ಹೋರಾಡಿದ ಉತ್ತರ ಕನ್ನಡ ಜಿಲ್ಲೆ ಹೆಂಜಾ ನಾಯಕ ಹೆಸರಿನಲ್ಲಿ ಸೇನಾ ಆಯ್ಕೆ ಪೂರ್ವ ತರಬೇತಿ ಶಾಲೆ. | 75 | 22,50,000 |
| | ಒಟ್ಟು | **225** | **67,50,000** |

V. Akkamahadevi 20/6/22

**(ವಿ. ಅಕ್ಕಮಹಾದೇವಿ)**
ಸರ್ಕಾರದ ಅಧೀನ ಕಾರ್ಯದರ್ಶಿ-1
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.